ಪೆಡಲಿನ ಮೇಲೆ ತುಸು ಊರಿ ಬಸ್ಸು ಓಡಿಸುತ್ತಿದ್ದ. ಹಿಂದಿನ ಆರೇಳು ದಿವಸಗಳಿಂದ ಹಗಲೂರಾತ್ರಿ ಸ್ವಲ್ಪವೂ ನಿದ್ರಿಸದೆ ಕೆಲಸ ಮಾಡಿದ್ದನಂತೆ. ನಮ್ಮ ತಿರುಗಾಟಕ್ಕೆ ಚಾಲಕನಾಗಿ ಬಂದಾಗ, ವಾಹನ ಚಲಾಯಿಸುತ್ತಿರುವಾಗ ತನ್ನ ಸೀಟಿನಲ್ಲಿ ಕುಳಿತರೆ ಸಾಕು, ನಿದ್ರಿಸುವ ಸ್ಥಿತಿಯಲ್ಲಿದ್ದ. ಬಿಡುವು ಇಲ್ಲದೆ ಕೆಲಸಕ್ಕೆ ಮಾಡಲು ಮಾಲೀಕರ ಒತ್ತಡ ಕಾರಣ ಇರಬಹುದು, ಬೇರೆ ಡ್ರೈವರ್ ಇಲ್ಲದಿರಬಹುದು ಅಥವಾ ರಜೆ ಮಾಡಿ ಸಂಬಳ ಕಳೆದುಕೊಳ್ಳುವ ಸ್ಥಿತಿಯೂ ಆತನದಲ್ಲದಿರಬಹುದು. ಇಷ್ಟು ತಿಳಿದ ಮೇಲೆ ನಾವು ಕೆಲವರು ಆತನ ಪಕ್ಕದಲ್ಲೇ ಬಂದು ಕೂತು ಮಾತನಾಡುವುದನ್ನು ನಿಲ್ಲಸಬಾರದೆಂದು ನಿರ್ಧರಿಸಿದೆವು.

ಅವನದು ನಿದ್ದೆ ತಪ್ಪಿಸಿಕೊಂಡು ವಾಹನ ಓಡಿಸುವ ಪಾಳಿಯಾದರೆ ನಮ್ಮದು ಅಂದಿನ ಮಟ್ಟಿಗೆ ಅವನನ್ನು ಎಚ್ಚರವಿಡುವ ಸರದಿ. ಈ ಮನುಷ್ಯ ಪ್ರಯತ್ನಗಳೆಲ್ಲ ಸಾಕಾಗುವುದಿಲ್ಲ ಎನಿಸಿದಾಗ ಮಧ್ಯಮಧ್ಯ ಬಸ್ಸು ನಿಲ್ಲಿಸಲು ಹೇಳಿ, ಅಲ್ಪಸ್ವಲ್ಪ ನಿದ್ರಿಸುವ ಅವಕಾಶ ನೀಡುತ್ತಾ ಪ್ರಯಾಣ ಬೆಳೆಸಿದವು. ನಿಂತುಕೊಂಡು ಬಸ್ಸು ಚಲಾಯಿಸುವಾಗ ಆತನ ಮುಖ ವ್ಯಗ್ರವಾಗುತ್ತಿತ್ತು. ಊದಿಕೊಂಡ ಕಣ್ಣು ಕೆಂಪಾಗಿ, ಕ್ಷಣಕ್ಕಾದರೂ ರೆಪ್ಪೆ ಮುಚ್ಚುತ್ತಿತ್ತು. ಪ್ರತಿ ಬಾರಿ ಕಣ್ಣಿಗೆ ಅರೆಕ್ಷಣದ ಜೊಂಪು ಹತ್ತಿದಾಗಲೂ ಕೈಯಲ್ಲಿ ಹಿಡಿದ ಸ್ಟೀಯರಿಂಗ್ ಚಕ್ರ ಗರಕ್ಕನೆ ಒಂದು ದಿಕ್ಕಿಗೆ ತಿರುಗುತ್ತಿತ್ತು. ಹಠಾತ್ ಬಸ್ಸು ಲಯ ತಪ್ಪಿದಂತೆ ಅನಿಸುತ್ತಿತ್ತು. ದಾರಿಯುದ್ದಕ್ಕೂ ಚಾಲಕ ರೆಪ್ಪೆಗಳನ್ನು ತೆರೆದಿಡಲು ಹೋರಾಡುತ್ತಾ, ನಿದ್ರಿಸುತ್ತಿರುವ ಬಸ್ಸಿನ ಎಚ್ಚರವಾಗಿ ನಮ್ಮನ್ನು ಸುರಕ್ಷಿತವಾಗಿ ರಾಯಚೂರು ತಲುಪಿಸಿದ್ದ. ಎಲ್ಲರೂ ಇಳಿದು ಹೋದ ಆಮೇಲೆ ಬಸ್ಸಿನ ನೆರಳಿನಲ್ಲಿ ಜಮಖಾನ ಹಾಕಿ ಅಂಗಿ ಬಿಚ್ಚಿ ಹಗಲಿಡೀ ಮಲಗಿದ್ದ.

ಇನ್ನು ನನ್ನ ಹುಟ್ಟೂರಿನ ಆಪ್ತ ಸ್ನೇಹಿತ, ಪ್ರಾಥಮಿಕ ಶಾಲೆಯ ಸಹಪಾಠಿಯೂ ಆಗಿದ್ದವನು ಈಗಲೂ ರಾತ್ರಿ ಪಾಳಿಯ ಬಸ್ ಚಾಲಕನೇ. ವಿದ್ಯಾಭ್ಯಾಸವನ್ನು ಬೇಗ ನಿಲ್ಲಿಸಿ ಅವನ ಕನಸಿನ ಉದ್ಯೋಗವಾದ ಡ್ರೈವಿಂಗನ್ನು ಅರಸಿ ಇನ್ನೊಂದು ಊರಿಗೆ ಹೋದವನು ಸ್ಥಳೀಯ ವ್ಯಾನುಗಳಲ್ಲಿ ಕ್ಲೀನರ್ ಆಗಿ ನೌಕರಿ ಶುರು ಮಾಡಿ, ನೈಟ್ ಬಸ್ಸುಗಳ ಧೀರೋದ್ದಾತ ಚಾಲಕನಾಗಿ ಬಡ್ತಿ ಪಡೆದು ತನ್ನ ಕನಸನ್ನು ಪೂರೈಸಿಕೊಂಡಿದ್ದ. ನಾವಿಬ್ಬರು ಭೇಟಿಯಾದಾಗಲೆಲ್ಲ ರಾತ್ರಿ ಪ್ರಯಾಣದ ಲೋಕದ ಬಗ್ಗೆ ಚರ್ಚೆ ಆಗುತ್ತದೆ. ಎಲ್ಲವೂ ಸ್ಪಷ್ಟ ಎನಿಸುವ ಹಗಲಿನ ಪ್ರಯಾಣವೇ ಸುಖ ಇರಬೇಕಲ್ಲ ಎಂದು ನಾನು ಹೇಳಿದರೆ, ರಾತ್ರಿ ಪಾಳಿಯ ಚಾಲನೆಯಷ್ಟು ಸಲೀಸು ಇನ್ನೊಂದಿಲ್ಲ ಎಂದು ಆತ ವಾದಿಸುತ್ತಾನೆ. ಹಗಲಿನಲ್ಲಾದರೆ ಎಂತಹ ಹೆದ್ದಾರಿ ರಸ್ತೆಯನ್ನೂ ವಾಚಾಮಗೋಚರವಾಗಿ ಬಳಸಿ ಹಾಳುಗೆಡಹುವವರು, ಉದ್ದ ಸಾಗಬೇಕಾದಲ್ಲಿ ಅಡ್ಡ ಬರುವವರು, ಅಶಿಸ್ತಿನ ಅಸಹನೆಯ ಮನುಷ್ಯರು, ದಿಕ್ಕುತೋಚದೇ ಅನಧಿಕೃತ ಪ್ರವೇಶ ಮಾಡುವ ಮುಗ್ಧ ಪ್ರಾಣಿಗಳು ಎಲ್ಲವೂ ಸೇರಿದ ಗೋಜಲು ಗೊಂದಲವಾಗುತ್ತದೆ. ನಡುರಾತ್ರಿಯ ಕಗ್ಗತ್ತಲೆಯ ಹೊತ್ತಾದರೆ ಹಗಲಿನಲ್ಲಿ ರಸ್ತೆಯಾನವನ್ನು ಧ್ವಂಸ ಮಾಡಿಹೋದ ಆ ಎಲ್ಲರೂ ಮನೆ ಸೇರಿ ಸ್ವಚ್ಛಂದ ಮಲಗಿರುತ್ತಾರೆ. ರಸ್ತೆಯನ್ನು ಬೆಳಗಿ ಹೊಳೆಯಿಸುವ ಚಂದ್ರ, ಮಿಂಚಿ ಮಿನುಗುವ ನಕ್ಷತ್ರಗಳು ಅಲ್ಲದಿದ್ದರೆ ಇನ್ನಷ್ಟು ಮತ್ತಷ್ಟು ರಾತ್ರಿ ಪಾಳಿಯ ಬಸ್ಸು, ಲಾರಿ ಮತ್ತೆ ಅವುಗಳ ಚಾಲಕರಿಗೆ ಬಿಟ್ಟುಕೊಟ್ಟಿರುತ್ತಾರೆ. ಅವನ ಪ್ರಕಾರ ರಾತ್ರಿಯ ಎಚ್ಚರವೂ ಒಂದು ಕಲೆ ಮತ್ತು ಸಿದ್ಧಿ. ನಿತ್ಯ ರಾತ್ರಿ ನಿದ್ದೆ ಬಿಡಬೇಕಾದರೆ ಹಗಲಿನಲ್ಲಿ ನಿದ್ದೆ ಹಿಡಿಯಬೇಕು. ಪ್ರಕೃತಿಗೆ ವಿರುದ್ಧವಾಗಿ ಹಗಲನ್ನು ರಾತ್ರಿ ಮಾಡಬೇಕು ರಾತ್ರಿಯನ್ನು ಹಗಲಾಗಿಸಬೇಕು. ಸೂರ್ಯ ಮೂಡುವಾಗ ಕಣ್ಮುಚ್ಚಿ ಮುಸುಕು ಎಳೆಯಬೇಕು, ಚಂದ್ರ ಮೂಡುವ ಹೊತ್ತಿಗೆ ಹಲ್ಲುಜ್ಜಿ ಊಟ ಮಾಡಿ ಸ್ಟೀಯರಿಂಗ್ ಹಿಡಿದು ಏಕಾಗ್ರತೆಯಲ್ಲಿ ಕೂರಬೇಕು. ನಡುವೆ ಒಂದೆರಡು ಕಡೆ ಖಡಕ್ ಚಹಾ ಕುಡಿಯಬೇಕು. ಎದುರಿನಿಂದ ಕೋರೈಸುವ ಬಣ್ಣಬಣ್ಣದ ಬೆಳಕು ಬೀರುತ್ತ ವಾಹನ ಚಲಾಯಿಸುವವರನ್ನು ಸುಧಾರಿಸಿಕೊಂಡು ಮುಂದೆ ಸಾಗಬೇಕು. ರಾತ್ರಿಯ ಖಾಲಿ ರಸ್ತೆಯಲ್ಲೂ ಅನಾವಶ್ಯಕ ಹಾರ್ನ್ ಒತ್ತುವವರನ್ನು ನಿರ್ಲಕ್ಷಿಸಬೇಕು. ಮಿತಿಮೀರಿದ ವೇಗದಲ್ಲಿ ನುಗ್ಗುವ ಸಣ್ಣ ವಾಹನಗಳನ್ನು ಆಧರಿಸಿ ಪೊರೆಯಬೇಕು. ರಸ್ತೆ ಹಂಪುಗಳನ್ನು ನಿಧಾನಕ್ಕೆ ನಾಲಗೆ ಕಚ್ಚಿಕೊಂಡು ಹತ್ತಿ ಇಳಿಸಬೇಕು. ನಿದ್ದೆಯ ನಶೆಯಲ್ಲಿ ತೇಲುತ್ತಿರುವ ಎಲ್ಲ ಪ್ರಯಾಣಿಕರ ತೊಟ್ಟಿಲು ತೂಗುತ್ತ ತಲುಪುವಲ್ಲಿಗೆ ತಲುಪಿಸಿ, ಗಾಡಿ ನಿಲ್ಲಿಸಿ ಪ್ರಯಾಣಿಕರು ಒಬ್ಬೊಬ್ಬರಾಗಿ ಸರಂಜಾಮು ಸಮೇತ ಧನ್ಯವಾದವನ್ನೂ ಹೇಳದೇ ಕೆಲವೊಮ್ಮೆ ಕಾರಣಾಂತರದಿಂದ ತಡವಾಗಿದ್ದಕ್ಕೆ